## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | **1026** |
| **ಸದಸ್ಯರ ಹೆಸರು** | : | **ಶ್ರೀ ರಘು ಆರ್. (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | : | **25.08.2026** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪಶುಸಂಗೋಪನೆ ಮತ್ತು ಮೀನುಗಾರಿಕೆಯನ್ನು ಉತ್ತೇಜಿಸಲು ಪದವೀಧರರಿಗೆ ಅಥವಾ ವಿದ್ಯಾವಂತ ನಿರುದ್ಯೋಗಿಗಳಿಗೆ ವಿಶೇಷ ತರಬೇತಿ ಕೊಡಲು ಪ್ರತ್ಯೇಕ ತರಬೇತಿ ಕೇಂದ್ರ ತೆರೆಯಬೇಕೆಂಬ ಉದ್ದೇಶ ಸರ್ಕಾರದ ಮುಂದಿದೆಯೇ: (ಮಾಹಿತಿ ನೀಡುವುದು) | ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಈಗಾಗಲೇ 30 ಜಿಲ್ಲೆಗಳಲ್ಲಿ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಇವುಗಳಲ್ಲಿ ರೈತರಿಗೆ, ಪದವೀಧರರಿಗೆ, ನಿರುದ್ಯೋಗಿ ಯುವಕ/ಯುವತಿಯರಿಗೆ, ಜಾನುವಾರು ಮಾಲೀಕರಿಗೆ, ಉದ್ಯಮಿಗಳಿಗೆ ಹಾಗೂ ಪಶುಸಂಗೋಪನಾ ಚಟುವಟಿಕೆಗಳಲ್ಲಿ ತೊಡಗಿರುವ ಆಸಕ್ತರಿಗೆ ಆಧುನಿಕ ಪಶುಪಾಲನಾ ಪದ್ಧತಿಗಳ ಕುರಿತು ತರಬೇತಿಯನ್ನು ನೀಡಲಾಗುತ್ತಿದೆ.<br><br>ಇದಲ್ಲದೇ ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಶ್ವವಿದ್ಯಾಲಯ ಇವರ ವತಿಯಿಂದಲೂ ಸಹ ಹೈನುಗಾರಿಕೆ, ಕೋಳಿ, ಕುರಿ, ಮೇಕೆ ಹಾಗೂ ಹಂದಿ ಸಾಕಾಣಿಕೆಯ ಕುರಿತು ತರಬೇತಿಗಳನ್ನು ಪಶುವೈದ್ಯಕೀಯ ಮಹಾವಿದ್ಯಾಲಯಗಳು, ಸಂಶೋಧನಾ ಕೇಂದ್ರಗಳು ಮತ್ತು ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಆಯೋಜಿಸಲಾಗುತ್ತಿದೆ. ಅದೇ ರೀತಿಯಾಗಿ ಹೈನು ವಿಜ್ಞಾನ ಮಹಾವಿದ್ಯಾಲಯಗಳು ಮತ್ತು ಮೀನುಗಾರಿಕೆ ವಿಜ್ಞಾನ ಮಹಾವಿದ್ಯಾಲಯಗಳಲ್ಲಿ ಕ್ರಮವಾಗಿ ಹೈನು ತಂತ್ರಜ್ಞಾನ ಹಾಗೂ ಮೀನುಗಾರಿಕೆ ಕುರಿತು 14 ತರಬೇತಿ ಕೇಂದ್ರಗಳಲ್ಲಿ ತರಬೇತಿಗಳನ್ನು ನೀಡಲಾಗುತ್ತಿದೆ.<br><br>ಮೀನುಗಾರಿಕೆಯನ್ನು ಉತ್ತೇಜಿಸಲು ಇಲಾಖೆಯ ವ್ಯಾಪ್ತಿಯಲ್ಲಿ ಇರುವ 04 ತರಬೇತಿ ಕೇಂದ್ರಗಳಲ್ಲಿ ಮೀನುಗಾರಿಕೆಯಲ್ಲಿ ಆಸಕ್ತಿ ಹೊಂದಿ ತರಬೇತಿ ಪಡೆಯಲು ಇಚ್ಛಿಸುವ ಪದವೀಧರರಿಗೆ/ವಿದ್ಯಾವಂತ ನಿರುದ್ಯೋಗಿಗಳಿಗೆ/ಸಾರ್ವಜನಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡಲಾಗುತ್ತಿದೆ ಮತ್ತು ಕೃಷಿ ಮೇಳ, ಮತ್ಸ್ಯಮೇಳಗಳಲ್ಲಿ ಮೀನು ಕೃಷಿ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಅಲ್ಲದೇ ಮೀನುಗಾರಿಕೆ ವಿಜ್ಞಾನ ಮಹಾವಿದ್ಯಾಲಯಗಳಲ್ಲಿಯೂ ಸಹ ಮೀನು ಕೃಷಿಯ ಬಗ್ಗೆ ತರಬೇತಿ ನೀಡಲಾಗುತ್ತಿದೆ. |

| | | |
|---|---|---|
| ಆ | ಪಶು ಸಂಗೋಪನೆ ಮತ್ತು ಮೀನುಗಾರಿಕೆ ಅವಲಂಬಿಸಿ ಸ್ವಾವಲಂಬನೆ/ಸ್ವಯಂ ಉದ್ಯೋಗಕ್ಕಾಗಿ ಆರ್ಥಿಕ ಉತ್ತೇಜನ ನೀಡಲು ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದೆ? (ಮಾಹಿತಿ ನೀಡುವುದು) | ಪಶು ಸಂಗೋಪನೆ ಇಲಾಖೆಯಲ್ಲಿ ಸ್ವಾವಲಂಬನೆ/ಸ್ವಯಂ ಉದ್ಯೋಗಕ್ಕಾಗಿ ಆರ್ಥಿಕ ಉತ್ತೇಜನೆ ನೀಡಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಂಡಿದೆ.<br><br>1. ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು 9600 ಮಹಿಳಾ ಫಲಾನುಭವಿಗಳಿಗೆ ಶೇ.25 ರಷ್ಟು ಸಹಾಯಧನದಲ್ಲಿ ಹಸು/ಎಮ್ಮೆ ಖರೀದಿಸಲು ಸಹಾಯಧನ ನೀಡಲಾಗುವುದು.<br>2. ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳಲ್ಲಿ ಕುರಿ ಮತ್ತು ಮೇಕೆ (10+1) ಸಾಕಾಣಿಕೆಯನ್ನು ಪ್ರೋತ್ಸಾಹಿಸಲು 9777 ಫಲಾನುಭಾವಿಗಳಿಗೆ ಶೇ.25 ರಷ್ಟು ಸಹಾಯಧನ ನೀಡಲಾಗುವುದು. (**ಅನುಬಂಧ ಲಗತ್ತಿಸಿದೆ**)<br><br>ಮೀನುಗಾರಿಕೆ ಅವಲಂಬಿಸಿ ಸ್ವಾವಲಂಬನೆ/ಸ್ವಯಂ ಉದ್ಯೋಗಕ್ಕಾಗಿ ಆರ್ಥಿಕ ಉತ್ತೇಜನ ನೀಡಲು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ.<br><br>1) PMMSY-ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ (ಕೇಂದ್ರ ಪುರಸ್ಕೃತ ಯೋಜನೆ)<br>2) ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು<br>3) ಯಾಂತ್ರೀಕೃತ ಮೀನುಗಾರಿಕಾ ದೋಣಿಗಳಿಗೆ ರಾಜ್ಯ ಮಾರಾಟ ಕರ ರಹಿತ ಡೀಸೆಲ್ ವಿತರಣೆ"ಯೋಜನೆ<br>4) ಮೀನುಗಾರರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್ ವಿತರಣೆ ಯೋಜನೆ<br>5) ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು<br>6) ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ<br>7) ಮೀನುಮರಿಗಳ ಖರೀದಿಗೆ ಸಹಾಯಧನ<br>8) ಕೆರೆ/ಜಲಾಶಯದ ಅಂಚಿನಲ್ಲಿ ಮೀನು ಕೊಳ ನಿರ್ಮಾಣಕ್ಕೆ ಸಹಾಯ<br>9) ಹಿನ್ನೀರು ಪ್ರದೇಶಗಳಲ್ಲಿ ಮೀನು ಮರಿ ಬಿತ್ತನೆ<br>10) ವಾಣಿಜ್ಯ ಬ್ಯಾಂಕುಗಳಿಗೆ ವ್ಯತ್ಯಾಸದ ಬಡ್ಡಿ ಮರುಪಾವತಿ<br>11) ಮಂಜುಗಡ್ಡೆ ಸ್ಥಾವರಗಳು ಬಳಸುವ ವಿದ್ಯುತ್ ಮೇಲೆ ಸಹಾಯಧನ<br>12) ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ<br>13) ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ<br>14) ಮೋಟರೀಕೃತ ಮೀನುಗಾರಿಕೆ ದೋಣಿಗಳ ಹೊಸ ಇಂಜಿನ್ ಖರೀದಿಗೆ ಸಹಾಯಧನ |

**ಸಂಖ್ಯೆ:ಪಸಮೀ 296 ಪಅಸೇ 2026**

**(ಸಿ. ಪುಟ್ಟರಂಗಶೆಟ್ಟಿ)**

ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

# ಅನುಬಂಧ

**ಪಶು ಸಂಗೋಪನೆ ಇಲಾಖೆಯಲ್ಲಿ ಸ್ವಾವಲಂಬನೆ / ಸ್ವಯಂ ಉದ್ಯೋಗಕ್ಕಾಗಿ ಆರ್ಥಿಕ ಉತ್ತೇಜನೆ ನೀಡಲು ಸರ್ಕಾರ ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಂಡಿದೆ.**

| ಕ್ರ. ಸಂ | ಯೋಜನೆಯ ಹೆಸರು | ಘಟಕದ ವೆಚ್ಚ | ಸಹಾಯಧನ | ಫಲಾನುಭವಿ ವಂತಿಕೆ / ಬ್ಯಾಂಕ್ ಸಾಲ | ಫಲಾನುಭವಿಗಳ ಸಂಖ್ಯೆ |
|---|---|---|---|---|---|
| 1. | ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು ಮಹಿಳಾ ಫಲಾನುಭವಿಗಳಿಗೆ ಶೇ.25 ರಷ್ಟು ಸಹಾಯಧನದಲ್ಲಿ ಹಸು / ಎಮ್ಮೆ ಖರೀದಿಸಲು ಸಹಾಯಧನ ನೀಡಲಾಗುವುದು. | ರೂ.75000/- | ರೂ.18750/- (ಶೇ 25 ರಷ್ಟು) | ರೂ. 56250/- (ಶೇ 75 ರಷ್ಟು) | 9600 |
| 2. | ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳಲ್ಲಿ ಕುರಿ ಮತ್ತು ಮೇಕೆ (10+1) ಸಾಕಾಣಿಕೆಯನ್ನು ಪ್ರೋತ್ಸಾಹಿಸಲು ಫಲಾನುಭಾವಿಗಳಿಗೆ ಶೇ.25 ರಷ್ಟು ಸಹಾಯಧನ ನೀಡಲಾಗುವುದು. | ರೂ.90000/- | ರೂ.22500/- (ಶೇ 25 ರಷ್ಟು) | ರೂ. 67500/- (ಶೇ 75 ರಷ್ಟು) | 9777 |

ನಿರ್ದೇಶಕರು
ಪಶುಪಾಲನಾ ಇಲಾಖೆ